# ಕರ್ನಾಟಕ ಸರ್ಕಾರದ ನಡವಳಿಗಳು

ಸಂಖ್ಯೆ 234
ದಿನಾಂಕ 10/5/17

ವಿಷಯ: "ಸಾಧನೆ" ಯೋಜನೆಯಡಿ ನೀಡಲಾಗುವ ಆರ್ಥಿಕ ನೆರವನ್ನು ರೂ.30,000/-ಗಳಿಂದ ರೂ.50,000/-ಗಳಿಗೆ ಹೆಚ್ಚಿಸುವ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ: ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆರವರ ಏಕಕಡತ ಸಂಖ್ಯೆ: ಇಸಿ/ಸಿ.2/ಯೋಜನೆ/ಸಾಧನೆ ಪರಿಷ್ಕರಣೆ/05/2017-18.

**ಪ್ರಸ್ತಾವನೆ:**

2017-18ನೇ ಸಾಲಿನ ಆಯವ್ಯಯ ಭಾಷಣದ ಕ್ರಮ ಸಂಖ್ಯೆ: 158 (4)ನೇ ಬಿಂದುವಿನಲ್ಲಿ "ಸಾಧನೆ" ಯೋಜನೆಯಡಿ ನೀಡಲಾಗುವ ಆರ್ಥಿಕ ನೆರವನ್ನು ರೂ.30,000/-ಗಳಿಂದ ರೂ.50,000/-ಗಳಿಗೆ ಹೆಚ್ಚಿಸಲಾಗುವುದೆಂದು ಘೋಷಿಸಲಾಗಿದೆ. ವಿಕಲಚೇತನರು ಇತರೆ ಸಾಮಾನ್ಯ ಜನರಂತೆ ಕ್ರೀಡೆಗಳಲ್ಲಿ ಭಾಗವಹಿಸಿ ಸಮಾಜದ ಮುಖ್ಯವಾಹಿನಿಗೆ ಸೇರುವಂತೆ ಅವಕಾಶ ಕಲ್ಪಿಸುವುದು, ಇಂತಹ ಚಟುವಟಿಕೆಗಳಲ್ಲಿ ಭಾಗವಹಿಸುವ ವಿಕಲಚೇತನರಿಗೆ ಉತ್ತೇಜನ ಮತ್ತು ಪ್ರೋತ್ಸಾಹ ನೀಡುವ ಸಲುವಾಗಿ ರೂ.30,000/-ಗಳ ಪ್ರೋತ್ಸಾಹಧ ನೀಡುವ ಯೋಜನೆಯು 1995-96ನೇ ಸಾಲಿನಿಂದ ಯೋಜನೆಯು ಅನುಷ್ಠಾನಗೊಳ್ಳುತ್ತಿದೆ. ಇತ್ತೀಚಿನ ದಿನಗಳಲ್ಲಿ ದೈನಂದಿನ ಪ್ರಯಾಣ ವೆಚ್ಚಗಳು ಮತ್ತು ಇತರೆ ವೆಚ್ಚಗಳು ದುಬಾರಿಯಾಗಿದ್ದು, ಇವರಿಗೆ ನೀಡುತ್ತಿರುವ ಪ್ರೋತ್ಸಾಹಧನ ಅತೀ ಕಡಿಮೆಯಾಗಿರುವುದರಿಂದ ಪ್ರೋತ್ಸಾಹಧನವನ್ನು ರೂ.30,000/-ಗಳಿಂದ ರೂ.50,000/-ಗಳಿಗೆ ಹೆಚ್ಚಿಸುವುದು ಅವಶ್ಯವಾಗಿರುತ್ತದೆ ಹಾಗೂ ಈ ಯೋಜನೆಯಡಿ 200 ಫಲಾನುಭವಿಗಳಿಗೆ ಈ ಸೌಲಭ್ಯವನ್ನು ಒದಗಿಸಬಹುದಾಗಿರುತ್ತದೆಂದು ತಿಳಿಸುತ್ತಾ ಯೋಜನೆಯ ರೂಪುರೇಷೆ ಹಾಗೂ ಮಾರ್ಗಸೂಚಿಯನ್ನು ರೂಪಿಸಿ, ತಡೆಪಟ್ಟಿಯೊಂದಿಗೆ ಸಲ್ಲಿಸಿರುತ್ತಾರೆ.

ಸದರಿ ಯೋಜನೆಯನ್ನು 2017-18ನೇ ಸಾಲಿಗೆ ಅನುಷ್ಠಾನಗೊಳಿಸಲು ರೂ. 100.00 ಲಕ್ಷಗಳ ಆಯವ್ಯಯದ ಅವಶ್ಯಕತೆಯಿದ್ದು, ಸದರಿ ಆಯವ್ಯಯವನ್ನು ಲೆಕ್ಕ ಶೀರ್ಷಿಕೆ:2235-02-101-0-52 ಯೋಜನೆ ಉಪಲೆಕ್ಕಶೀರ್ಷಿಕೆ-051 ಸಾಮಾನ್ಯ ವೆಚ್ಚಗಳಡಿ ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಮೇಲೆ ಓದಲಾದ ಏಕಕಡತದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 93 ಪಿಹೆಚ್‌ಪಿ 2017, ಬೆಂಗಳೂರು, ದಿನಾಂಕ:09.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಭಾಷಣದ ಕ್ರಮ ಸಂಖ್ಯೆ: 158 (4)ನೇ ಬಿಂದುವಿನಲ್ಲಿ "ಸಾಧನೆ" ಯೋಜನೆಯಡಿ ನೀಡಲಾಗುವ ಆರ್ಥಿಕ ನೆರವನ್ನು ರೂ.30,000/-ಗಳಿಂದ ರೂ.50,000/-ಗಳಿಗೆ ಹೆಚ್ಚಿಸಲಾಗುವುದೆಂದು ಘೋಷಿಸಿದನ್ವಯ ಕ್ರೀಡೆಗಳಲ್ಲಿ ಭಾಗವಹಿಸಲಾಗುವ ವಿಕಲಚೇತನರಿಗೆ ಉತ್ತೇಜನ ಮತ್ತು ಪ್ರೋತ್ಸಾಹ ನೀಡುವ ಸಲುವಾಗಿ ಪ್ರೋತ್ಸಾಹಧನವನ್ನು ರೂ.30,000/-ಗಳಿಂದ ರೂ.50,000/-ಗಳಿಗೆ ಹೆಚ್ಚಿಸುವ ಯೋಜನೆಯನ್ನು ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಈ ಹಿಂದೆ ಸದರಿ ಯೋಜನೆಯಡಿ ಹೊರಡಿಸಲಾಗಿರುವ ಯೋಜನಾ ಮಾರ್ಗಸೂಚಿಗಳಿಗೊಳಪಟ್ಟು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು 2017-18ನೇ ಸಾಲಿನ ಲೆಕ್ಕ ಶೀರ್ಷಿಕೆ: 2235-02-101-0-52 (ಅಂಗವಿಕಲರಿಗೆ ಸಾಧನ ಮತ್ತು ಸಲಕರಣೆಗಳು) ಯೋಜನೆ ಉಪ ಲೆಕ್ಕಶೀರ್ಷಿಕೆ-051 ಸಾಮಾನ್ಯ ವೆಚ್ಚಗಳಡಿ ಒದಗಿಸಿರುವ ಆಯವ್ಯಯದಲ್ಲಿ ಭರಿಸತಕ್ಕದ್ದು.

ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 225 ವೆಚ್ಚ-10/2017, ದಿ:22.04.2017 ಮತ್ತು ಪಿಡಿ 72 ಐಎಂಎಂ 2017, ದಿ:27.04.2017ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

9/5/2017
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
6. ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮದ ಕಛೇರಿ ಕರ್ನಾಟಕ, ನಂ.55, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಕಟ್ಟಡ, ಅಭಯ ಸಂಕೀರ್ಣ, 2ನೇ ಮಹಡಿ, ರಿಸಲ್ದಾರ್ ರಸ್ತೆ, ಶೇಷಾದ್ರಿ ಪುರಂ, ಬೆಂಗಳೂರು.
7. ಅಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ(2&10), ವಿಧಾನ ಸೌಧ, ಬೆಂಗಳೂರು
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
12. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ ಒಡಿಜಿಸಿ/ ಹೆಚ್ಚುವರಿ ಪ್ರತಿಗಳು.